ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 442 ಗ್ರಾಪಂಅ 2020 ದಿನಾಂಕ: ೨೦|೦೬|೨೦೨೦

**ಸುತ್ತೋಲೆ**

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಕಾರ್ಯಕ್ರಮವು ಸೇರಿದಂತೆ) ತ್ರೈಮಾಸಿಕ ಪರಿಶೀಲನಾ ಸಮಿತಿ ಸಭೆಗೆ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ನಮೂನೆಗಳಲ್ಲಿ ಮಾಹಿತಿ ಪಡೆದು ಪರಿಣಾಮಕಾರಿ ಪರಿಶೀಲನೆ – ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019 ದಿನಾಂಕ:11-06-2019.

* * * * *

ಸಂವಿಧಾನದ 73 ನೇ ತಿದ್ದುಪಡಿಯ ಆಶೋತ್ತರಗಳಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಜವಾಬ್ದಾರಿಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಲಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿವಿಧ ಅಭಿವೃದ್ಧಿ ಯೋಜನೆಗಳಡಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಬಿಡುಗಡೆಗೊಳಿಸುತ್ತಿರುವ ಅನುದಾನಗಳನ್ನು ಸಮರ್ಪಕವಾಗಿ ಬಳಸಿಕೊಂಡು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿವೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ತ್ರೈಮಾಸಿಕ ಪರಿಶೀಲನಾ ಕೆ.ಡಿ.ಪಿ. ಸಮಿತಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಹೋಬಳಿ / ಗ್ರಾಮ ಪಂಚಾಯತಿ ಮಟ್ಟದಲ್ಲಿನ ಸ್ಥಳೀಯ ಅಧಿಕಾರಿ/ಸಿಬ್ಬಂದಿಗಳಿಂದ ಸಾರ್ವಜನಿಕ ಶಿಕ್ಷಣಕ್ಕೆ ಸಂಬಂಧಿಸಿದ ಯೋಜನೆ ಮತ್ತು ಅನುದಾನದ ವಿವರಗಳನ್ನು ಹಾಗೂ ಇವುಗಳ ಅನುಷ್ಠಾನದಲ್ಲಿ ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪರಾಮರ್ಶಿಸುವುದು ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಯೋಜನೆಗಳ ಅನುಷ್ಠಾನಕ್ಕೆ ಸೂಕ್ತ ಮಾರ್ಗದರ್ಶನ ನೀಡುವ ಉದ್ದೇಶವನ್ನು ಸರ್ಕಾರ ಹೊಂದಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019, ದಿನಾಂಕ:11-06-2019 ರಂದು ರಚಿಸಲಾಗಿದೆ. ಅದರನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಿತ ಶಾಲಾ ಮುಖ್ಯೋಪಾಧ್ಯಾಯರು ಆಹ್ವಾನಿತರಾಗಿರುತ್ತಾರೆ ಎಂದು ಆದೇಶಿಸಲಾಗಿದೆ.

**ಸಾರ್ವಜನಿಕ ಶಿಕ್ಷಣ:**

ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಡ್ಡಾಯವಾಗಿ ಶಾಲಾಭಿವೃದ್ಧಿಯೊಂದಿಗೆ ನಿಗದಿತ ಜ್ಞಾನ, ಕೌಶಲ್ಯ ಮತ್ತು ಮೌಲ್ಯಗಳನ್ನು ಹೊಂದಲು ಮಕ್ಕಳನ್ನು ಸಜ್ಜುಗೊಳಿಸುವುದು ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಎಲ್ಲಾ ವಯಸ್ಸಿನ ಶಾಲೆಗೆ ಹೋಗುವ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವುದು ಹಾಗೂ ಶೈಕ್ಷಣಿಕ ಆಡಳಿತವನ್ನು ವಿಕೇಂದ್ರೀಕರಿಸಿ ಸಮುದಾಯದ ಒಡೆತನದೊಂದಿಗೆ ಮಕ್ಕಳ ಶಿಕ್ಷಣ ಹಕ್ಕನ್ನು ಪೂರೈಸುವುದು.

ಜನವಸತಿ, ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಮೂಲಕ 5 ವರ್ಷಕ್ಕೆ ದೂರದೃಷ್ಟಿ ಯೋಜನೆ ತಯಾರಿಸಿ ಅದರಿಂದ ವಾರ್ಷಿಕ ಯೋಜನೆಗಳನ್ನು ರೂಪಿಸುವಾಗ ಆದ್ಯತಾ ಪಟ್ಟಿ ಮಾಡುವಾಗ ಈ ಕೆಳಗಿನ ಅಂಶಗಳನ್ನು ಕೇಂದ್ರೀಕರಿಸಿ ಸಾರ್ವಜನಿಕ ಶಿಕ್ಷಣ ಇಲಾಖೆಯು ಕ್ರಮ ಕೈಗೊಳ್ಳುವುದು.

1) ಶಾಲಾ ಹಾಜರಾತಿ ಬಗ್ಗೆ ಮಾಹಿತಿ ಕಲೆ ಹಾಕುವುದು ಹಾಗೂ ಉತ್ತೇಜಿಸುವುದು. ವಿಶೇಷವಾಗಿ ಹೆಣ್ಣು ಮಕ್ಕಳ ದಾಖಲಾತಿಯ ಬಗ್ಗೆ ಉತ್ತೇಜಿಸುವುದು.
2) ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಶಾಲೆಗೆ ಕರೆತರಲು ಕ್ರಮ ಕೈಗೊಳ್ಳುವುದು ಹಾಗೂ 14 ವರ್ಷದ ಎಲ್ಲಾ ಮಕ್ಕಳಿಗೆ ಕಡ್ಡಾಯ ಶಿಕ್ಷಣ ನೀಡಲು ಕ್ರಮ ಕೈಗೊಳ್ಳುವುದು.
3) ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಅಗತ್ಯವಾದ ಹೆಚ್ಚುವರಿ ತರಗತಿಗಳನ್ನು ನಡೆಸಲು ಕ್ರಮ ಕೈಗೊಳ್ಳುವುದು.
4) ಕಲಿಕೆಯಲ್ಲಿ ಅಳವಡಿಸಿಕೊಳ್ಳಲಾದ ಹೊಸ ವಿಧಾನಗಳನ್ನು ಶಾಲಾ ಮಕ್ಕಳಿಗೆ ನೀಡುವುದು.
5) ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಅನುಷ್ಠಾನಗೊಳಿಸುವುದು.
6) ಪೌಷ್ಠಿಕಾಂಶ ಕೊರತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸುವುದು.
7) ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು (ಶೌಚಾಲಯ ಸ್ವಚ್ಚತೆ, ಕೊಠಡಿಗಳ ದುರಸ್ಥಿ, ಪೀಠೋಪಕರಣ ವ್ಯವಸ್ಥೆ, ವಿದ್ಯುಚ್ಛಕ್ತಿ ಸೌಲಭ್ಯಗಳು) ಒದಗಿಸುವುದು.
8) ಶಾಲಾ ಕಾಂಪೌಂಡ್ ನಿರ್ಮಾಣ ಮಾಡುವುದು.
9) ಮಳೆನೀರು ಕೊಯ್ಲು ವ್ಯವಸ್ಥೆ ರೂಪಿಸುವುದು.
10) ಉಚಿತ ಸಮವಸ್ತ್ರ, ಶಾಲಾ ಬ್ಯಾಗ್, ಬೈಸಿಕಲ್, ಪಠ್ಯಪುಸ್ತಕ, ವಿದ್ಯಾರ್ಥಿ ವೇತನ ವಿತರಣೆ, ಕ್ರೀಡಾ ಸಾಮಗ್ರಿಗಳನ್ನು ವಿತರಿಸುವುದು.
11) ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಮತ್ತು ಶುಚಿತ್ವ ಕಾಪಾಡಿ ಬಳಕೆ ಮಾಡುವುದು.
12) ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ನಿರ್ವಹಣೆ ಮಾಡುವುದು.
13) ಮಕ್ಕಳಲ್ಲಿ ನೈರ್ಮಲ್ಯ ಪದ್ದತಿಗಳು/ಹವ್ಯಾಸಗಳನ್ನು ರೂಪಿಸುವುದಕ್ಕೆ ಕ್ರಮ ಕೈಗೊಳ್ಳುವುದು.
14) ಆರೋಗ್ಯ ಸುರಕ್ಷಾ ಸಮಿತಿ ಅಡಿಯಲ್ಲಿ ಮಕ್ಕಳಿಗೆ ಆರೋಗ್ಯ ತಪಾಸಣೆ ನಡೆಸುವುದು.
15) ಶಾಲೆಗಳಲ್ಲಿ ರಾಷ್ಟ್ರೀಯ/ನಾಡ ಹಬ್ಬಗಳ ಆಚರಣೆ, ಎಸ್.ಡಿ.ಎಂ.ಸಿ ಸಮಿತಿಗಳ ಸಮರ್ಪಕ ಕಾರ್ಯನಿರ್ವಹಣೆ ಮಾಡುವುದು.
16) ಮಕ್ಕಳ ಬೇಡಿಕೆಗಳ ರಚನೆ ಮತ್ತು ಪರಿಹಾರಗಳ ಬಗ್ಗೆ ಅನುಸರಿಸಲಾದ ಕ್ರಮಗಳನ್ನು ಮಕ್ಕಳ ಗ್ರಾಮ ಸಭೆಯಲ್ಲಿ ಚರ್ಚಿಸುವುದು.
17) ಗ್ರಂಥಾಲಯಗಳ ವ್ಯವಸ್ಥೆ ಮತ್ತು ಅದರ ಬಳಕೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದು.

ಜ್ಞಾನ ನಿರ್ವಹಣೆ:

1) ಸರ್ಕಾರದ ಎಲ್ಲಾ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವುದು.
2) ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳ ಆಯೋಜನೆ ಮಾಡುವುದು.
3) ಗ್ರಾಮ ಪಂಚಾಯತಿ ಮಟ್ಟದ ಗ್ರಾಮಗಳ ಇತಿಹಾಸಗಳನ್ನು ಕಲೆಹಾಕುವುದು / ಸಂಗ್ರಹಿಸುವುದು.
4) ಸಂಸ್ಕೃತಿ ಮತ್ತು ಪರಂಪರೆಯನ್ನು ದಾಖಲಿಸುವುದು.
5) ಮಾನವ ಅಭಿವೃದ್ಧಿ ಸೂಚ್ಯಾಂಕಗಳ ತುಲನೆ ಮಾಡಲು ಕ್ರಮ ಕೈಗೊಳ್ಳುವುದು.
6) ಮಾನವ ಅಭಿವೃದ್ಧಿ ಸಮೀಕ್ಷೆಗಳನ್ನು ಕೈಗೊಳ್ಳಲು ಕ್ರಮ ಕೈಗೊಳ್ಳುವುದು.
7) ದತ್ತಾಂಶಗಳ ಸುಲಭ ಲಭಿಸುವಿಕೆ ಬಗ್ಗೆ ಕ್ರಮ ಕೈಗೊಳ್ಳುವುದು.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಗ್ರಾಮ ಪಂಚಾಯತಿ ಕೆ.ಡಿ.ಪಿ. ಸಭೆಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಿತ ಶಾಲಾ ಮುಖ್ಯೋಪಾಧ್ಯಾಯರು ನಮೂನೆ-I ರಲ್ಲಿನ ಮಾಹಿತಿಯೊಂದಿಗೆ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಆದೇಶಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

(ಎಸ್.ಆರ್.ಉಮಾಶಂಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ:

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು (ಈ ಸುತ್ತೋಲೆಯನ್ನು ತಾಲ್ಲೂಕು ಮಟ್ಟದ ಎಲ್ಲಾ ಇಲಾಖಾಧಿಕಾರಿಗಳಿಗೆ ಹಾಗೂ ಎಲ್ಲಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ರವರಿಗೆ ಕಳುಹಿಸಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳು (ಕೆ.ಡಿ.ಪಿ.) ಪ್ರಗತಿ ಪರಿಶೀಲನಾ ಸಭೆಗೆ ಹೋಬಳಿ / ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿ / ನೌಕರರು ಹಾಜರಾಗಲು ನಿರ್ದೇಶನ ನೀಡುವುದು).

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರುಗಳು, ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ವಿಶೇಷ ಅಧಿಕಾರಿ (ಜಿ.ಪಂ.), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಮುಖ್ಯಸ್ಥರು, ವಿಕೇಂದ್ರೀಕರಣ ವಿಶ್ಲೇಷಣಾ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

# ನಮೂನೆ – I

## 2019–20 ನೇ ಸಾಲಿನಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದಡಿ ಸಾರ್ವಜನಿಕ ಶಿಕ್ಷಣ ಇಲಾಖೆಯು ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪರಾಮರ್ಶೆಯ ವಿವರಗಳು

ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೀಮಿತವಾಗಿರುವಂತೆ

ಪಂಚಾಯತ್ ಹೆಸರು : ____________________ ____________________ ಮಾಹೆಯ ಅಂತ್ಯದವರೆವಿಗೆ

| ಕ್ರ ಸಂ. | ಇಲಾಖೆಯ ಕಾರ್ಯಕ್ರಮಗಳ ವಿವರ | ಭೌತಿಕ ಪ್ರಗತಿ (ಸಂಖ್ಯೆಗಳಲ್ಲಿ) | | ಆರ್ಥಿಕ ಪ್ರಗತಿ (ರೂ. ಲಕ್ಷಗಳಲ್ಲಿ) | |
|---|---|---|---|---|---|
| | | ಗುರಿ | ಸಾಧನೆ | ಲಭ್ಯವಿರುವ ಅನುದಾನ | ಸಾಧಿಸಿರುವ ಪ್ರಗತಿ |
| 1 | ಶಾಲಾ ಹಾಜರಾತಿ | | | | |
| 2 | ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಶಾಲೆಗೆ ಕರೆತರುವುದು | | | | |
| 3 | ಮಕ್ಕಳ ಶೈಕ್ಷಣಿಕ ಗುಣಮಟ್ಟ | | | | |
| 4 | ಕಲಿಕೆಯಲ್ಲಿ ಅಳವಡಿಸಿಕೊಳ್ಳಲಾದ ಹೊಸ ವಿಧಾನಗಳು | | | | |
| 5 | ಮಧ್ಯಾಹ್ನದ ಬಿಸಿಯೂಟ ಯೋಜನೆ ಅನುಷ್ಠಾನ | | | | |
| 6 | ಪೌಷಿಕಾಂಶ ಕೊರತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ | | | | |
| 7 | ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳು (ಶೌಚಾಲಯ ಸ್ವಚ್ಛತೆ, ಕೊಠಡಿಗಳ ದುರಸ್ಥಿ, ಪೀಠೋಪಕರಣ ವ್ಯವಸ್ಥೆ, ವಿದ್ಯುಚ್ಛಕ್ತಿ ಸೌಲಭ್ಯಗಳು) | | | | |
| 8 | ಶಾಲಾ ಕಾಂಪೌಂಡ್ ನಿರ್ಮಾಣ | | | | |
| 9 | ಮಳೆನೀರು ಕೊಯ್ಲು ವ್ಯವಸ್ಥೆ | | | | |
| 10 | ಉಚಿತ ಸಮವಸ್ತ್ರ ವಿತರಣೆ | | | | |
| 11 | ಉಚಿತ ಬೈಸಿಕಲ್ ವಿತರಣೆ | | | | |
| 12 | ಉಚಿತ ಪಠ್ಯಪುಸ್ತಕ ವಿತರಣೆ | | | | |
| 13 | ವಿದ್ಯಾರ್ಥಿ ವೇತನ ವಿತರಣೆ | | | | |
| 14 | ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಮತ್ತು ಬಳಕೆ | | | | |
| 15 | ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ನಿರ್ವಹಣೆ-ಜಲಾಮೃತ ಯೋಜನೆ | | | | |
| 16 | ಮಕ್ಕಳಲ್ಲಿ ನೈರ್ಮಲ್ಯ ಪದ್ಧತಿಗಳು/ಹವ್ಯಾಸಗಳನ್ನು ರೂಪಿಸುವುದು | | | | |
| 17 | ಮಕ್ಕಳಿಗೆ ಆರೋಗ್ಯ ತಪಾಸಣೆ-ಆರೋಗ್ಯ ಸುರಕ್ಷಾ ಸಮಿತಿ | | | | |
| 18 | ಶಾಲೆಗಳಲ್ಲಿ ರಾಷ್ಟ್ರೀಯ/ನಾಡ ಹಬ್ಬಗಳ ಆಚರಣೆ | | | | |
| 19 | ಎಸ್.ಡಿ.ಎಂ.ಸಿ ಸಮಿತಿಗಳ ಸಮರ್ಪಕ ಕಾರ್ಯನಿರ್ವಹಣೆ | | | | |
| 20 | ಮಕ್ಕಳ ಬೇಡಿಕೆಗಳು ರಚನೆ ಮತ್ತು ಪರಿಹಾರಗಳ ಬಗ್ಗೆ ಅನುಸರಿಸಲಾದ ಕ್ರಮಗಳು | | | | |
| 21 | ಗ್ರಂಥಾಲಯಗಳ ವ್ಯವಸ್ಥೆ/ಬಳಕೆ | | | | |
| 22 | ಸರ್ಕಾರದ ಎಲ್ಲಾ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವುದು | | | | |
| 23 | ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳ ಆಯೋಜನೆ | | | | |

| ಕ್ರ. ಸಂ. | ಇಲಾಖೆಯ ಕಾರ್ಯಕ್ರಮಗಳ ವಿವರ | ಭೌತಿಕ ಪ್ರಗತಿ (ಸಂಖ್ಯೆಗಳಲ್ಲಿ) | | ಆರ್ಥಿಕ ಪ್ರಗತಿ (ರೂ. ಲಕ್ಷಗಳಲ್ಲಿ) | |
|---|---|---|---|---|---|
| | | ಗುರಿ | ಸಾಧನೆ | ಲಭ್ಯವಿರುವ ಅನುದಾನ | ಸಾಧಿಸಿರುವ ಪ್ರಗತಿ |
| 24 | ಗ್ರಾಮ ಪಂಚಾಯತಿ ಮಟ್ಟದ ಗ್ರಾಮಗಳ ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯನ್ನು ದಾಖಲಿಸುವುದು | | | | |
| 25 | ಮಾನವ ಅಭಿವೃದ್ಧಿ ಸೂಚ್ಯಾಂಕಗಳ ತುಲನೆ | | | | |
| 26 | ಮಾನವ ಅಭಿವೃದ್ಧಿ ಸಮೀಕ್ಷೆಗಳು | | | | |
| 27 | ದತ್ತಾಂಶಗಳ ಸುಲಭ ಲಭಿಸುವಿಕೆ | | | | |
| 28 | ಇತರೆ | | | | |
| | ಒಟ್ಟು | | | | |

- ಆರ್ಥಿಕ ಗುರಿ ಪ್ರಗತಿ ಲಭ್ಯವಾಗದ ಯೋಜನೆಗಳಡಿ ಭೌತಿಕ ಪ್ರಗತಿ ಮಾಹಿತಿ ನೀಡುವುದು.